ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಪೊಲೀಸ್ ಇಲಾಖೆ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡಪ್ರಭ ದಿನಾಂಕ : DATE : 21/02/2020

# ಡಿಜಿಪಿ ಸೂದ್ ವಿರುದ್ಧದ ಬಂಧನ ವಾರಂಟ್‌ಗೆ ಸುಪ್ರೀಂ ತಡೆಯಾಜ್ಞೆ

ನವದೆಹಲಿ: ದಿವ್ಯ ಎಸ್ಸಿಯೊಬ್ಬರ ವರ್ಗಾವಣೆಗೆ ಸಂಬಂಧಿಸಿದಂತೆ ಕರ್ನಾಟಕದ ಪೊಲೀಸ್ ಮಹಾನಿರ್ದೇಶಕ (ಡಿಜಿಪಿ) ಪ್ರವೀಣ್ ಸೂದ್ ವಿರುದ್ಧ ರಾಜ್ಯ ಹೈಕೋರ್ಟ್ ಹೊರಡಿಸಿದ್ದ ಜಾಮೀನು ರಹಿತ ಬಂಧನ ವಾರಂಟ್‌ಗೆ ಸುಪ್ರೀಂಕೋರ್ಟ್ ಗುರುವಾರ ತಡೆಯಾಜ್ಞೆ ನೀಡಿದೆ. ಫೆ.18ರ ಮಂಗಳವಾರ ಹೈಕೋರ್ಟ್ ಹೊರಡಿಸಿದ್ದ ವಾರಂಟ್ ವಿರುದ್ಧ ಗುರುವಾರ ಪ್ರವೀಣ್ ಸೂದ್ ಸುಪ್ರೀಂಕೋರ್ಟ್ ಮೆಟ್ಟಿಲೇರಿದ್ದರು. ತುರ್ತಾಗಿ ತಮ್ಮ ಅರ್ಜಿಯನ್ನು ವಿಚಾರಣೆ ನಡೆಸಬೇಕು ಎಂದು ಮನವಿ ಮಾಡಿದ್ದರು. ರಾಜ್ಯದ ಪೊಲೀಸ್ ಮುಖ್ಯಸ್ಥರ ವಿರುದ್ಧ ಅಪರೂಪದ ಆದೇಶವನ್ನು ಕರ್ನಾಟಕ ಹೈಕೋರ್ಟ್ ಹೊರಡಿಸಿದೆ. ಇದಕ್ಕೆ ತಡೆಯಾಜ್ಞೆ ನೀಡಬೇಕು ಎಂದು ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ ವಾದಿಸಿದರು. ಮುಖ್ಯ ನ್ಯಾಯಮೂರ್ತಿ ಎಸ್.ಎ. ಬೋಬ್ಡೆ ನೇತೃತ್ವದ ಪೀಠ ವಾರಂಟ್‌ಗೆ ತಡೆ ನೀಡಿತು.